# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : **2310**

**ಮಾನ್ಯ ಸದಸ್ಯರ ಹೆಸರು** : **ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು)**

**ಉತ್ತರಿಸುವ ದಿನಾಂಕ** : **26.03.2026**

**ಉತ್ತರಿಸುವ ಸಚಿವರು** : **ಗೃಹ ಸಚಿವರು**

<table>
<tr><th>ಕ್ರ. ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ರಾಜ್ಯದಲ್ಲಿ 2023-24, 2024-25, 2025-26ನೇ ಸಾಲಿನಲ್ಲಿ ಫೆಬ್ರುವರಿ 2026ರ ಅಂತ್ಯದವರೆಗೆ ವರದಿಯಾದ ಸೈಬರ್ ಅಪರಾಧ ಪ್ರಕರಣಗಳೆಷ್ಟು; (ವರ್ಷವಾರು ವರ್ಗೀಕರಣದೊಂದಿಗೆ ವಿವರ ನೀಡುವುದು) ಈ ಪೈಕಿ 5 ಲಕ್ಷ ರೂಪಾಯಿಗಿಂತ ಹೆಚ್ಚಿನ ವಂಚನೆಗೊಳಗಾದ ಪ್ರಕರಣಗಳು ಎಷ್ಟು;</td><td rowspan="2">ರಾಜ್ಯದಲ್ಲಿ 2023-24, 2024-25, 2025-26ನೇ ಸಾಲಿನಲ್ಲಿ ಫೆಬ್ರುವರಿ 2026ರ ಅಂತ್ಯದವರೆಗೆ ವರದಿಯಾದ ಸೈಬರ್ ಅಪರಾಧ ಪ್ರಕರಣಗಳು, ಪ್ರಕರಣಗಳಲ್ಲಿ ದಾಖಲಿಸಿರುವ ಎಫ್.ಐ.ಆರ್.ಗಳು, ಬಂಧಿಸಿರುವ ಆರೋಪಿಗಳ ಸಂಖ್ಯೆ ಮತ್ತು ಈ ಪೈಕಿ 5 ಲಕ್ಷ ರೂಪಾಯಿಗಿಂತ ಹೆಚ್ಚಿನ ವಂಚನೆಗೊಳಗಾದ ಪ್ರಕರಣಗಳ ವಿವರಗಳು ಈ ಕೆಳಕಂಡಂತಿವೆ:-<br><br><table><tr><th>ವರ್ಷ</th><th>ಒಟ್ಟು ಸೈಬರ್ ಅಪರಾಧಗಳ ಸಂಖ್ಯೆ</th><th>ಬಂಧಿತ ಸಂಖ್ಯೆ</th><th>ಈ ಪೈಕಿ 5 ಲಕ್ಷ ರೂಪಾಯಿಗಿಂತ ಹೆಚ್ಚಿನ ವಂಚನೆಗೊಳಗಾದ ಪ್ರಕರಣಗಳ ಸಂಖ್ಯೆ</th></tr><tr><td>**2023**</td><td>22255</td><td>1098</td><td>16219</td></tr><tr><td>**2024**</td><td>22483</td><td>1036</td><td>13452</td></tr><tr><td>**2025**</td><td>14899</td><td>761</td><td>8766</td></tr><tr><td>**2026** (Feb-20th)</td><td>2007</td><td>17</td><td>1363</td></tr></table><br>**ಸೈಬರ್ ಕ್ರೈಂ ವಿಭಾಗದಲ್ಲಿ ಸಿಬ್ಬಂದಿ ಕೊರತೆ ಹಾಗೂ ಸೈಬರ್ ಅಪರಾಧವನ್ನು ತಡೆಗಟ್ಟಲು ಮತ್ತು ಪರಿಹರಿಸಲು ಸೈಬರ್ ಕ್ರೈಂ ವಿಭಾಗವನ್ನು ಬಲಪಡಿಸುವ ಕುರಿತು ಕೈಗೊಂಡಿರುವ ಕ್ರಮದ ವಿವರಗಳು ಈ ಕೆಳಕಂಡಂತಿದೆ:-**<br>• ರಾಜ್ಯದ ಪ್ರತಿ ಜಿಲ್ಲೆ/ನಗರಗಳಲ್ಲಿ ಒಟ್ಟು 45 CEN ಪೊಲೀಸ್ ಠಾಣೆಗಳನ್ನು ಸೈಬರ್ ಅಪರಾಧ ಪೊಲೀಸ್ ಠಾಣೆಗಳೆಂದ (**Cyber Crime Police Station**) ಎಂದು ಮರುಪದನಾಮೀಕರಿಸಿ ಆದೇಶಿಸಿದೆ.<br>• ಸೈಬರ್ ಅಪರಾಧ ಪೊಲೀಸ್ ಠಾಣೆಗಳಲ್ಲಿ **Information Technology Act-2000 & IPC/BNS** ಅಡಿಯಲ್ಲಿ ದಾಖಲಾಗುವ ಪ್ರಕರಣಗಳನ್ನು ದಾಖಲಿಸಲು ಹಾಗೂ ತನಿಖೆ ಕೈಗೊಳ್ಳಲು ಅಧಿಕಾರ ನೀಡಿ, ವ್ಯಾಪ್ತಿ ನಿಗದಿಪಡಿಸಿ ಅಧಿಸೂಚಿಸಲಾಗಿದೆ.<br>• ಪ್ರತಿ ಸೈಬರ್ ಠಾಣೆಯಲ್ಲಿ ಸೈಬರ್ ಕ್ರೈಂಗೆ</td></tr>
<tr><td>ಆ)</td><td>ಸೈಬರ್ ಅಪರಾಧ ಪ್ರಕರಣಗಳಲ್ಲಿ ದಾಖಲಾಗಿರುವ ಎಫ್ಐಆರ್ ವರ್ಷವಾರು ವಿವರ ಮತ್ತು ಫೆಬ್ರುವರಿ-2026 ರವರೆಗೆ ಮಾಡಿದ ಬಂಧನಗಳ ವಿವರ ನೀಡುವುದು; ಸೈಬರ್ ಕ್ರೈಂ ವಿಭಾಗದಲ್ಲಿ ಸಿಬ್ಬಂದಿ ಕೊರತೆ ಇದೆ ಎಂಬ ದೂರು ಇದ್ದು, ಸೈಬರ್ ಅಪರಾಧವನ್ನು ತಡೆಗಟ್ಟಲು ಮತ್ತು ಪರಿಹರಿಸಲು ಸೈಬರ್ ಕ್ರೈಂ ವಿಭಾಗವನ್ನು ಬಲಪಡಿಸಲು ಸರ್ಕಾರ ಯೋಚಿಸುತ್ತಿದೆಯೇ;</td></tr>
</table>

| | | |
|---|---|---|
| | | ಸಂಬಂಧಿಸಿದಂತೆ ಪ್ರಕರಣಗಳ ತನಿಖೆಯನ್ನು ಕೈಗೊಳ್ಳಲು ಪೊಲೀಸ್ ಇನ್ಸ್‌ಪೆಕ್ಟರ್ ಹುದ್ದೆಯನ್ನು ಡಿವೈಎಸ್ಪಿ/ಎಸಿಪಿ ಹುದ್ದೆಗಳನ್ನಾಗಿ ಮೇಲ್ದರ್ಜೆಗೇರಿಸಿ ಆದೇಶಿಸಿರುತ್ತದೆ.<br>• ಮುಂದುವರೆದಂತೆ, ರಾಜ್ಯದಲ್ಲಿ ಹೆಚ್ಚುತ್ತಿರುವ ಸೈಬರ್ ಅಪರಾಧ ಪ್ರಕರಣಗಳನ್ನು ಸುಗಮವಾಗಿ ಮತ್ತು ಸಮಪರ್ಕವಾಗಿ ತಡೆಗಟ್ಟುವ/ತನಿಖೆ ಕೈಗೊಳ್ಳುವ ನಿಟ್ಟಿನಲ್ಲಿ ವಿವಿಧ ದರ್ಜೆಯ ಅಧಿಕಾರಿ/ಸಿಬ್ಬಂದಿಗಳ ಹುದ್ದೆಗಳ ಸೃಜನೆಯೊಂದಿಗೆ ಸೈಬರ್ ಕಮಾಂಡ್ ಘಟಕವನ್ನು ಸೃಜಿಸಲಾಗಿದೆ. |
| ಇ) | ಆರೋಪಿಗಳನ್ನು ಬಂಧಿಸಲು ಪೊಲೀಸರು ಇತರ ನಗರಗಳಿಗೆ ವಿಮಾನದಲ್ಲಿ ಪ್ರಯಾಣಿಸಲು ಅನುಮತಿ ನೀಡಲು ಸರ್ಕಾರ ವಿಳಂಬ ಮಾಡುತ್ತಿರುವುದು ನಿಜವೇ; ಸೈಬರ್ ಅಪರಾಧದಲ್ಲಿ ಅಪರಾಧಿಗಳು ಅತ್ಯಾಧುನಿಕ ವಿಧಾನಗಳನ್ನು ಬಳಸುತ್ತಿದ್ದಾರೆ; ಇದನ್ನು ನಿಭಾಯಿಸಲು ಸೈಬರ್ ಅಪರಾಧ ಇಲಾಖೆ ಯಾವ ರೀತಿಯಲ್ಲಿ ಕ್ರಮಗಳನ್ನು ತೆಗೆದುಕೊಳ್ಳುತ್ತಿದೆ?<br>(ಸಂಪೂರ್ಣ ಮಾಹಿತಿ ನೀಡುವುದು) | ಸೈಬರ್ ಪ್ರಕರಣಗಳಲ್ಲಿ ಆರೋಪಿಗಳನ್ನು ಬಂಧಿಸಲು ಪೊಲೀಸರು ಇತರ ನಗರಗಳಿಗೆ ವಿಮಾನದಲ್ಲಿ ಪ್ರಯಾಣಿಸಲು ವಿಭಾಗಗಳಲ್ಲಿ ಮೇಲಾಧಿಕಾರಿಗಳ ಅನುಮತಿ ಪಡೆದು ಆರೋಪಿಗಳನ್ನು ಬಂಧಿಸಲು/ದಸ್ತಗಿರಿ ಮಾಡಲು ಇತರ ನಗರಕ್ಕೆ ತೆರಳಲು ಅನುಮತಿಯನ್ನು ನೀಡಲಾಗುತ್ತಿದೆ. ಯಾವುದೇ ವಿಳಂಬವಾಗುತ್ತಿಲ್ಲ.<br><br>ಸೈಬರ್ ಕ್ರೈಂ ವಿಭಾಗದಲ್ಲಿ ಸೈಬರ್ ಪ್ರಕರಣಗಳನ್ನು ಇತ್ಯರ್ಥಪಡಿಸಲು ಆಧುನಿಕ ತಂತ್ರಜ್ಞಾನ ಹೊಂದಿರುವ ಉಪಕರಣಗಳನ್ನು ಬಳಸಲಾಗುತ್ತಿದೆ ಹಾಗೂ ಆಧುನಿಕ ವಿದ್ಯುನ್ಮಾನ ತಾಂತ್ರಿಕ ಉಪಕರಣಗಳನ್ನು ಬಳಸಲು ಸಿಬ್ಬಂದಿಗಳಿಗೆ ವಿಶೇಷ ತರಬೇತಿಯನ್ನು ಸಹ ಒದಗಿಸಲಾಗಿರುತ್ತದೆ. ಸಿಸಿಯು ಕಛೇರಿಯಲ್ಲಿ ಈಗಾಗಲೇ ಸಿಎಫ್‌ಯು (ಸೈಬರ್ ಫಾರೆನ್ಸಿಕ್ ಯುನಿಟ್) ವಿಭಾಗವು ಹಿರಿಯ ಅಧಿಕಾರಿಗಳ ಉಸ್ತುವಾರಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಸಿಎಫ್‌ಯು ವಿಭಾಗದ ಸೈಬರ್ ಲ್ಯಾಬ್‌ನಲ್ಲಿ ಆಧುನಿಕ ತಂತ್ರಜ್ಞಾನ ಸಲಕರಣೆಗಳನ್ನು ಬಳಸಿಕೊಂಡು ಸಿಎಫ್‌ಯು ವಿಭಾಗದಿಂದ ಅತ್ಯಾಧುನಿಕ ತಂತ್ರಜ್ಞಾನ ಸಾಫ್ಟ್‌ವೇರ್‌ಗಳನ್ನು ಬಳಸಿಕೊಂಡು ಪ್ರಕರಣಗಳಲ್ಲಿ ತಾಂತ್ರಿಕ ಸಹಾಯವನ್ನು ಒದಗಿಸಲಾಗುತ್ತಿದ್ದು, ಸೈಬರ್ ಕ್ರೈಂ ಪೊಲೀಸ್ ಠಾಣೆಗಳನ್ನು ಕಾರ್ಯ ನಿರ್ವಹಿಸುತ್ತಿರುವ ಪೊಲೀಸ್ ಠಾಣೆಗಳ ಪ್ರಕರಣಗಳಲ್ಲಿನ ತನಿಖೆಯಲ್ಲಿ ತಾಂತ್ರಿಕ ಸಹಾಯವನ್ನು ಒದಗಿಸಲಾಗುತ್ತಿದೆ. |

**ಸಂಖ್ಯೆ: ಹೆಚ್‌ಡಿ 41 ಪಿಸಿಕ್ಯೂ 2026**

(ಡಾ: ಜಿ. ಪರಮೇಶ್ವರ)
ಗೃಹ ಸಚಿವರು